ಇ) ಇಲ್ಲ

ಈ) ಇಂತಹ ಯಾವುದೇ ಮನವಿ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ.

ಪ್ರಶ್ನೆ ಸಂಖ್ಯೆ : 76 (72) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ)

ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ. ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ಸಮೀಪದ ಚಾಮಲಪುರದಲ್ಲಿ ಕಲ್ಲಿದ್ದಲು ವಿದ್ಯುತ್ ಸ್ಥಾವರ ಸ್ಥಾಪಿಸಲು ಉದ್ದೇಶಿಸಲಾಗಿದೆಯೇ;

ಆ. ಹಾಗಿದ್ದಲ್ಲಿ, ಉದ್ದೇಶಿತ ಸ್ಥಾವರ ಸ್ಥಾಪನೆಯಿಂದ ಜೀವರಾಶಿ ನಾಶವುಂಟಾಗುವುದೆಂದು ನಾಗರೀಕರ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮ ಉಂಟಾಗುವುದೆಂದು ತಿಳಿಸಿ, ಮೈಸೂರು ಜಿಲ್ಲೆಯಾದ್ಯಂತ ಸ್ಥಾವರ ವಿರೋಧಿ ಚಳುವಳಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ. ಜೀವರಾಶಿ ನಾಶ ಹಾಗೂ ನಾಗರೀಕರ ಅನಾರೋಗ್ಯಕ್ಕೆ ಕಾರಣವಾಗುವ ಉದ್ದೇಶಿತ ಸ್ಥಾವರದ ಸ್ಥಾಪನೆ ನಿಲ್ಲಿಸುವ ಬಗ್ಗೆ ಸರ್ಕಾರದ ನಿಲುವೇನು; ನಾಗರೀಕರಿಗೆ ಕೆಡುಕುಂಟು ಮಾಡುವ ಈ ಸ್ಥಾವರದ ಅವಶ್ಯಕತೆ ಇದೆಯೇ;

ಶ್ರೀ ಹೆಚ್.ಡಿ.ರೇವಣ್ಣ

ಅ) ಹೌದು.

ಆ) ಹೌದು.

ಇ) ರಾಜ್ಯದಲ್ಲಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಸರಿದೂಗಿಸುವ

ನಟ್ಟಿನಲ್ಲಿ ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ಸಮೀಪದ ಚಾಮಲಾಪುರ ಸಮೀಪ ಕಲ್ಲಿದ್ದಲು ವಿದ್ಯುತ್ ಸ್ಥಾವರನ್ನು ಸ್ಥಾಪಿಸಲು ಉದ್ದೇಶಿಸಿದೆ. ವಿದ್ಯುತ್ ಸ್ಥಾವರದ ಸ್ಥಾಪನೆಯ ಇನ್ನು ಪ್ರಾರಂಭಿಕ ಹಂತದಲ್ಲಿದೆ. ಯೋಜನೆಯನ್ನು ಅನುಷ್ಠಾನಗೊಳಿಸಲು ಅರಣ್ಯ ಮತ್ತು ಪರಿಸರ ಮಂತ್ರಾಲಯ, ಭಾರತ ಸರ್ಕಾರದ ಇವರಿಂದ ಯೋಜನೆಗೆ ಅನುಮೋದನೆಯನ್ನು ನೀಡಬೇಕಾಗಿರುತ್ತದೆ. ಈ ಅನುಮೋದನೆಯನ್ನು ಅರಣ್ಯ ಮತ್ತು ಪರಿಸರ ಇಲಾಖೆಯು ಪರಿಸರ ಮತ್ತು ಸಾರ್ವಜನಿಕರ ಮೇಲೆ ಉಂಟಾಗಬಹುದಾದ ಪ್ರಭಾವಗಳನ್ನು ಪರಿಗಣಿಸಿ Environment Impact Assessment ಅಧ್ಯಯನ ಮಾಡಿದ ನಂತರವೇ ಈ ಯೋಜನೆಗೆ ಒಪ್ಪಿಗೆಯನ್ನು ನೀಡುತ್ತದೆ. ಪರಿಸರದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಬಗ್ಗೆ ಅಧ್ಯಯನವನ್ನು (Environment Impact Assessment) ಮಾಡಬೇಕಾಗಿರುತ್ತದೆ.

ಪ್ರಶ್ನೆ ಸಂಖ್ಯೆ : 80 (213) ಶ್ರೀ ಶಿವರಾಮು (ಗಂಡಸಿ)

ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ. ರಾಜೀವ್ ಗಾಂಧಿ ಗ್ರಾಮೀಣ ವಿದ್ಯುತ್ ಯೋಜನೆ ಯಾವ ಜಿಲ್ಲೆಗೆ ಯಾವಾಗ ಮಂಜೂರಾತಿಯಾಗಿರುತ್ತದೆ;

ಆ. ಈ ಯೋಜನೆಗೆ ಮಂಜೂರಾತಿಯಾಗಿರುವ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

ಇ. ಗುತ್ತಿಗೆ ಪಡೆದಿರುವ ಗುತ್ತಿಗೆದಾರರ ಹೆಸರು, ಮೊತ್ತ ಪ್ರಗತಿ ಮತ್ತು ಪೂರ್ಣಗೊಳ್ಳಲು ಕರಾರಿನಂತೆ ಅಂತಿಮ ದಿನಾಂಕ ಯಾವುದು (ಜಿಲ್ಲಾವಾರು ನೀಡುವುದು);

ಈ. ಕರಾರಿನಂತೆ ಪೂರ್ಣಗೊಳ್ಳದಿದ್ದಲ್ಲಿ ಕಾರಣಗಳೇನು;

ಶ್ರೀ ಹೆಚ್.ಡಿ.ರೇವಣ್ಣ

ಅ)&ಆ) ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯು